**ಕರ್ನಾಟಕ ಸರ್ಕಾರ**

**(ಪೊಲೀಸ್ ಇಲಾಖೆ)**

**ಪೊಲೀಸ್ ಆಯುಕ್ತರು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು, ಬೆಂಗಳೂರು ನಗರ ರವರ ನಡವಳಿಗಳು**

ಉಪಸ್ಥಿತರು : ಭಾಸ್ಕರ್ ರಾವ್, ಐ.ಪಿ.ಎಸ್, ಪೊಲೀಸ್ ಆಯುಕ್ತರು, ಬೆಂಗಳೂರು ನಗರ

ವಿಷಯ : ದಿನಾಂಕ: 30.07.2020, 31.07.2020 ಮತ್ತು 01-08-2020 ರಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ನಡೆಸಲಾಗುವ ಸಾಮಾನ್ಯ ಪ್ರವೇಶ ಪರೀಕ್ಷಾ ಸಂಬಂಧ ಪರೀಕ್ಷಾ ಕೇಂದ್ರಗಳ ಸುತ್ತ 200 ಮೀಟರ್ ವ್ಯಾಪ್ತಿಯಲ್ಲಿ ಪ್ರತಿಬಂಧಕಾಜ್ಞೆಯನ್ನು ಹೊರಡಿಸಿರುವ ಬಗ್ಗೆ.

ಉಲ್ಲೇಖ : 1. ಜಿಲ್ಲಾಧಿಕಾರಿಗಳು ಬೆಂಗಳೂರು ಜಿಲ್ಲೆ ರವರ ಕಛೇರಿಯ ಪತ್ರ ಸಂಖ್ಯೆ: ಪರೀಕ್ಷೆ/ಸಿಆರ್/04/2020-21, ದಿನಾಂಕ:20.07.2020.

2. ಕಾರ್ಯ ನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಅ.ಸ.ಪ. ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್.13/2019-20, ದಿನಾಂಕ: 18-07-2020.

***

**ಪ್ರಸ್ತಾವನೆ:**

ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ 2020ನೇ ಸಾಲಿನ ಸಾಮಾನ್ಯ ಪ್ರವೇಶ ಪರೀಕ್ಷೆಯು ದಿನಾಂಕ: 30.07.2020, 31.07.2020 ಮತ್ತು 01-08-2020 ರಂದು ಬೆಂಗಳೂರಿನ ಒಟ್ಟು 81 ವಿವಿಧ ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದೆ. ಈ ಸಂಬಂಧ ಪರೀಕ್ಷಾ ಪಾವಿತ್ರ್ಯತೆಯನ್ನು ಕಾಪಾಡಲು ಹಾಗೂ ಪರೀಕ್ಷೆಯನ್ನು ಸುರಕ್ಷಿತವಾಗಿ ಶಾಂತಿಯುತವಾಗಿ ನಡೆಸುವ ಸಲುವಾಗಿ ಪರೀಕ್ಷಾ ಕೇಂದ್ರಗಳ ಸುತ್ತ 200 ಮೀಟರ್ ವ್ಯಾಪ್ತಿಯ ಪ್ರದೇಶಕ್ಕೆ ಅನ್ವಯಿಸುವಂತೆ ಪ್ರತಿಬಂಧಕಾಜ್ಞೆಯನ್ನು ಜಾರಿಗೊಳಿಸಲು ಉಲ್ಲೇಖಿತ ಪತ್ರದಲ್ಲಿ ಜಿಲ್ಲಾಧಿಕಾರಿಗಳು ಬೆಂಗಳೂರು ಜಿಲ್ಲೆ, ಬೆಂಗಳೂರು ರವರು ಕೋರಿರುತ್ತಾರೆ.

ಈ ವಿಷಯದ ಬಗ್ಗೆ ನಾನು ಖುದ್ದಾಗಿ ಮಾಡಿದ ವಿಚಾರಣೆಯಿಂದ ಮೇಲ್ಕಂಡ ದಿನಾಂಕಗಳಂದು ನಡೆಯುವ ಸಾಮಾನ್ಯ ಪ್ರವೇಶ ಪರೀಕ್ಷೆಗಳು ನಡೆಯುವ ಕೇಂದ್ರಗಳ ಸುತ್ತ 200 ಮೀಟರ್ ವ್ಯಾಪ್ತಿಯ ಪ್ರದೇಶಕ್ಕೆ ಅನ್ವಯಿಸುವಂತೆ ಪ್ರತಿಬಂಧಕಾಜ್ಞೆಯನ್ನು ಹೊರಡಿಸುವ ಅಗತ್ಯತೆ ಇರುವುದನ್ನು ಮನಗಂಡಿರುತ್ತೇನೆ. ಆದ್ದರಿಂದ ಈ ಆದೇಶ-

**ಆದೇಶ ಸಂಖ್ಯೆ: ಎಸ್‌ಬಿ/ಗು.ವಾ/ನಿಷೇದಾಜ್ಞೆ/26/2020, ದಿನಾಂಕ: 28.07.2020**

ಈ ದಿಸೆಯಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ಶಾಂತಿಯುತವಾಗಿ ನಡೆಸುವ ಹಿತದೃಷ್ಟಿಯಿಂದ ನನಗೆ ದಂಡ ಪ್ರಕ್ರಿಯಾ ಸಂಹಿತೆಯ ಕಲಂ.144ನೇ ಪ್ರಕರಣದ ಅನ್ವಯ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಭಾಸ್ಕರ್ ರಾವ್, ಐ.ಪಿ.ಎಸ್, ಪೊಲೀಸ್ ಆಯುಕ್ತರು, ಬೆಂಗಳೂರು ನಗರ, ಆದ ನಾನು, ಸಾಮಾನ್ಯ ಪ್ರವೇಶ ಪರೀಕ್ಷೆಯು ನಡೆಯುವ ದಿನಾಂಕ: 30.07.2020, 31.07.2020 ಮತ್ತು 01.08.2020 ರಂದು ಬೆಳಿಗ್ಗೆ 09.00 ಗಂಟೆಯಿಂದ ಸಂಜೆ 4.30 ಗಂಟೆಯವರೆಗೆ ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯಲ್ಲಿ ಬರುವ 81 ಪರೀಕ್ಷಾ ಕೇಂದ್ರಗಳು ಮತ್ತು ಪರೀಕ್ಷಾ ಕೇಂದ್ರಗಳ ಸುತ್ತಲಿನ 200 ಮೀಟರ್ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಜೆರಾಕ್ಸ್ ಅಂಗಡಿಗಳು ಮತ್ತು ಸೈಬರ್ ಕೇಂದ್ರಗಳನ್ನು ಮುಚ್ಚುವಂತೆ ಮತ್ತು ಸದರಿ ಪ್ರದೇಶವನ್ನು ನಿಷೇಧಿತ ಪ್ರದೇಶ ಎಂದು ಘೋಷಿಸಿ ಪ್ರತಿಬಂಧಕಾಜ್ಞೆಯನ್ನು ವಿಧಿಸಿರುತ್ತೇನೆ. ಇದರೊಂದಿಗೆ ಬೆಂಗಳೂರು ನಗರದಲ್ಲಿ ಸಾಮಾನ್ಯ ಪ್ರವೇಶ ಪರೀಕ್ಷೆ ನಡೆಯುವ ಪರೀಕ್ಷಾ ಕೇಂದ್ರಗಳ ಪಟ್ಟಿಯನ್ನು ಲಗತ್ತಿಸಲಾಗಿದೆ.

ಈ ನನ್ನ ನಡವಳಿಯನ್ನು ನನ್ನ ಸಹಿ ಮತ್ತು ನನ್ನ ಕಛೇರಿಯ ಮೊಹರಿನಲ್ಲಿ 2020 ರ ಜುಲೈ ಮಾಹೆಯ ದಿನಾಂಕ 28 ರಂದು ಹೊರಡಿಸಲಾಗಿದೆ.

(ಭಾಸ್ಕರ್ ರಾವ್)
ಪೊಲೀಸ್ ಆಯುಕ್ತರು ಹಾಗೂ
ಅಪರ ಜಿಲ್ಲಾ ದಂಡಾಧಿಕಾರಿಗಳು,
ಬೆಂಗಳೂರು ನಗರ

ಭಾಸ್ಕರ್ ರಾವ್, ಭಾ.ಪೊ.ಸೇ.
ಪೊಲೀಸ್ ಆಯುಕ್ತರು
ಬೆಂಗಳೂರು ನಗರ.

ಗೆ,

1. ಸಂಕಲನಕಾರರು (Compiler) ಕರ್ನಾಟಕ ರಾಜ್ಯ ಪ್ರಪತ್ರ ಬೆಂಗಳೂರು ರವರು ಈ ಆದೇಶವನ್ನು ಕರ್ನಾಟಕ ರಾಜ್ಯ ಪತ್ರದಲ್ಲಿ ಕೂಡಲೇ ಪ್ರಕಟಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲು ಕೋರಲಾಗಿದೆ.
2. ಸಂಬಂಧಪಟ್ಟವರಿಗೆ

ಪ್ರತಿಯನ್ನು:

1. ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯ ಎಲ್ಲಾ ಹೆಚ್ಚುವರಿ ಪೊಲೀಸ್ ಆಯುಕ್ತರುಗಳು
2. ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯ ಎಲ್ಲಾ ಉಪ ಪೊಲೀಸ್ ಆಯುಕ್ತರುಗಳು
3. ಜಿಲ್ಲಾ ಪೊಲೀಸ್ ಅಧೀಕ್ಷಕರು, ಬೆಂಗಳೂರು ಗ್ರಾಮಾಂತರ ಜಿಲ್ಲೆ

ಪ್ರತಿಯನ್ನು ಅಭಿನಂದನೆಗಳೊಂದಿಗೆ:

1. ಮಹಾ ನಿರ್ದೇಶಕರು ಮತ್ತು ಪೊಲಿಸ್ ಮಹಾ ನಿರೀಕ್ಷಕರು, ಕರ್ನಾಟಕ ರಾಜ್ಯ, ಬೆಂಗಳೂರು.
2. ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕರು, ಕಾ&ಸು, ಕರ್ನಾಟಕ ರಾಜ್ಯ, ಬೆಂಗಳೂರು.
3. ಪೊಲೀಸ್ ಮಹಾ ನಿರೀಕ್ಷಕರು, ರಾಜ್ಯ ಗುಪ್ತವಾರ್ತೆ, ಕರ್ನಾಟಕ ರಾಜ್ಯ, ಬೆಂಗಳೂರು.
4. ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ.
5. ಕಾರ್ಯ ನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು.